**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/ 379 /ಗ್ರಾಪಂಅ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 04-06-2014.

ಇವರಿಂದ:
ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

ಇವರಿಗೆ:
ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತಿಗಳು.

ಮಾನ್ಯರೆ,

**ವಿಷಯ:** ಅನಧಿಕೃತವಾಗಿ ನಿವೇಶನ ಹಂಚಿಕೆ ಮಾಡಲು ಮತ್ತು ಅನಧಿಕೃತ ಲೇಔಟ್ ನಿರ್ಮಾಣ ಮಾಡಲು ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:03-06-2014 ರಂದು ನಡೆದ ಕರ್ನಾಟಕ ವಿಧಾನ ಸಭೆಯ ಅಂದಾಜು ಸಮಿತಿಯ ಸಭೆಯಲ್ಲಿ ಸದಸ್ಯರುಗಳು ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಸರ್ಕಾರಿ ಜಮೀನು, ಕೆರೆಗಳು, ಗುಂಡುತೋಪು ಮತ್ತು ಗೋಮಾಳ ಜಮೀನುಗಳಲ್ಲಿ ಅನಧಿಕೃತವಾಗಿ ನಿವೇಶನ ಹಂಚಿಕೆ ಮಾಡುತ್ತಿರುವುದಾಗಿ ಹಾಗೂ ನಾಗರೀಕ ಉದ್ದೇಶಕ್ಕೆ ಮೀಸಲಾಗಿರುವ ನಿವೇಶನಗಳನ್ನು ಅಂದರೆ ಸಾರ್ವಜನಿಕ ಉದ್ಯಾನವನ, ಆಟದ ಮೈದಾನ ಇತ್ಯಾದಿ ಅಕ್ರಮವಾಗಿ ಮಾರಾಟ ಮಾಡಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ತಂದಿರುತ್ತಾರೆ.

ಆದುದರಿಂದ, ಸರ್ಕಾರವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ್ದು, ಮೇಲೆ ತಿಳಿಸಿರುವಂತೆ ಕಾರಣರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ವಿರುದ್ಧ ನಿಯಮಾನುಸಾರ ತಮ್ಮ ಹಂತದಲ್ಲಿಯೇ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಹಾಗೂ ಸಂಬಂಧಿಸಿದ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣದ 43(ಎ), 48(4) ಹಾಗೂ 48(5) ರನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಮತ್ತು ಸಂಬಂಧಿಸಿದವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಅಗತ್ಯ ಕ್ರಮ ವಹಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

6/6/14

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.